# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **:** | **903 (1017)** |
| **ಸದಸ್ಯರ ಹೆಸರು** | **:** | **ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)** |
| **ಉತ್ತರಿಸಬೇಕಾದ ದಿನಾಂಕ** | **:** | **15.12.2025** |
| **ಉತ್ತರಿಸುವ ಸಚಿವರು** | **:** | **ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು** |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕಲ್ಯಾಣ ಕರ್ನಾಟಕದ ಶಿಕ್ಷಣ ಇಲಾಖೆಯಲ್ಲಿರುವ ಕಟ್ಟಡಗಳ ಸುರಕ್ಷತೆಗೆ ಸರ್ಕಾರ ಕೈಗೊಂಡ ಕ್ರಮವೇನು; (ಮಾಹಿತಿ ನೀಡುವುದು) | ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಸುರಕ್ಷತೆಗೆ ಸಂಬಂಧಿಸಿದಂತೆ ಎಲ್ಲಾ ಸರ್ಕಾರಿ ಶಾಲೆಗಳ ಶಾಲಾ ಕಟ್ಟಡ ಮತ್ತು ಕೊಠಡಿಗಳ ಸದೃಢತೆಯ ಬಗ್ಗೆ ಲೋಕೋಪಯೋಗಿ ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳ ಸಂಬಂಧಿಸಿದ ಅಭಿಯಂತರರ ಮೂಲಕ ಪರಿಶೀಲನೆ ನಡೆಸಿ ಸುರಕ್ಷತಾ ಪ್ರಮಾಣ ಪತ್ರ ಪಡೆಯಲು, ಹಾಗೂ ಶಿಥಿಲಗೊಂಡ ಕೊಠಡಿಗಳು ಮತ್ತು ಕಟ್ಟಡಗಳು ಇದ್ದಲ್ಲಿ, ಶಾಲೆಯ ಆವರಣದಲ್ಲಿ ಕಟ್ಟಡ ನಿರ್ಮಾಣ ಅಥವಾ ದುರಸ್ಥಿ ಕಾಮಗಾರಿಗಳ ನಡೆಯುತ್ತಿದ್ದಲ್ಲಿ ಅಂತಹ ವಿದ್ಯಾರ್ಥಿಗಳು ಹೋಗದಿರುವಂತೆ ಅಗತ್ಯ ಮುಂಜಾಗ್ರತೆ ಕ್ರಮಗಳನ್ನು ತೆಗೆದುಕೊಳ್ಳಲು ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು, ಆಯುಕ್ತರು/ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು/ಧಾರವಾಡ/ಕಲಬುರಗಿ ಆಯುಕ್ತಾಲಯ, ಉಪನಿರ್ದೇಶಕರು (ಆಡಳಿತ) ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.<br>ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಸುರಕ್ಷತೆಗೆ ಸಂಬಂಧಿಸಿದಂತೆ ಎಲ್ಲಾ ಸರ್ಕಾರಿ ಶಾಲೆಗಳ ಶಾಲಾ ಕಟ್ಟಡ ಮತ್ತು ಕೊಠಡಿಗಳ ಸದೃಢತೆ ಪ್ರಮಾಣ ಪತ್ರ ನೀಡಲು ಅಭಿವೃದ್ಧಿಪಡಿಸಿರುವ ಆನ್‌ಲೈನ್ ಪೋರ್ಟಲ್ ನಲ್ಲಿ ಶಾಲಗಳಿಗೆ ನೀಡಿರುವ ದೃಢಿಕರಣ ಪತ್ರಗಳ ಮಾಹಿತಿಯನ್ನು API ಮೂಲಕ ಶಾಲಾ ಶಿಕ್ಷಣ ಇಲಾಖೆಯ IT Portal SATS ಗೆ ಹಂಚಿಕೊಳ್ಳಲು ಲೋಕೋಪಯೋಗಿ ಇಲಾಖೆ ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳ ಮುಖ್ಯಸ್ಥರನ್ನು ಕೋರಲಾಗಿದೆ. |

| | | |
|---|---|---|
| ಆ | ಶಿಕ್ಷಣ ಇಲಾಖೆಯ ಕಟ್ಟಡಗಳ ಸುರಕ್ಷತೆಗೆ ಒಬ್ಬ ಅಭಿಯಂತರರನ್ನು ನೇಮಿಸಿದಲ್ಲಿ ಪರಿಶೀಲಿಸಲು ಅನುಕೂಲವಾಗುವುದಿಲ್ಲವೇ; | ಪ್ರಸ್ತುತ ಸರ್ಕಾರಿ ಶಾಲಾ ಕಟ್ಟಡ/ಕೊಠಡಿಗಳು ಶಿಥಿಲಗೊಂಡಿದ್ದಲ್ಲಿ, ದುರಸ್ಥಿ ಅಗತ್ಯವಿದ್ದಲ್ಲಿ ಸಂಬಂಧಿಸಿದ ಜಿಲ್ಲಾ/ತಾಲ್ಲೂಕುಗಳ ಲೋಕೋಪಯೋಗಿ ಇಲಾಖೆ ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳ ಇಂಜಿನಿಯರಿಂಗ್ ವಿಭಾಗದ ಮೂಲಕ ತಪಾಸಣಾ ವರದಿ ಪಡೆದು ಮುಂದಿನ ಕ್ರಮ ವಹಿಸಲಾಗುತ್ತಿದೆ. |
| ಇ | ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಅಭಿಯಂತರರ ಹುದ್ದೆಗಳನ್ನು ಸೃಜಿಸಲಾಗುವುದೇ? (ಮಾಹಿತಿ ನೀಡುವುದು) | ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಶಿಕ್ಷಣ ಇಲಾಖೆಯಿಂದ ಅಭಿಯಂತರರ ಹುದ್ದೆಗಳನ್ನು ಸೃಜಿಸುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |

**ಇಪಿ 413 ಯೋಸಕ 2025**

**(ಎಸ್.ಮಧುಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**